**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ. ನಾಗರಾಜು ಇವರು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ:**

ಕರ್ನಾಟಕ ರಾಜ್ಯದಲ್ಲಿ ಹಲವು ಸಮುದಾಯಗಳಿಗೆ ಸರ್ಕಾರದಿಂದ ಲಭಿಸುವ ಸವಲತ್ತುಗಳು ಮತ್ತು ಅನುದಾನಗಳನ್ನು ಪಡೆಯಲು ಪ್ರತ್ಯೇಕ ನಿಗಮವನ್ನು ರಚಿಸಿದ್ದು, ಅತೀ ಹಿಂದುಳಿದ ಹಾಗೂ ಸಾಮಾಜಿಕವಾಗಿ-ಶೈಕ್ಷಣಿಕವಾಗಿ-ಆರ್ಥಿಕವಾಗಿ ಹಿಂದುಳಿದ ಗೊಲ್ಲ(ಯಾದವ್) ಸಮುದಾಯಕ್ಕೆ ಇಲ್ಲಿಯವರೆಗೆ ಪ್ರತ್ಯೇಕ ನಿಗಮ ಸ್ಥಾಪಿಸಿರುವುದಿಲ್ಲ. ಈ ಹಟ್ಟಿಗಳಲ್ಲಿ ಮತ್ತು ಗುಡಿಸಲುಗಳಲ್ಲಿ ವಾಸ ಮಾಡುತ್ತಿರುವ ಗೊಲ್ಲ ಸಮುದಾಯದ ನಾಗರಿಕರಿಗೆ ಮೂಲಭೂತ ಸೌಕರ್ಯಗಳು ಇಲ್ಲದೇ ವಂಚಿತರಾಗಿರುತ್ತಾರೆ. ಗೊಲ್ಲರಹಟ್ಟಿಗಳಲ್ಲಿ/ಗುಡಿಸಲುಗಳಲ್ಲಿ ವಾಸಿಸುತ್ತಿರುವ ಈ ಗೊಲ್ಲ ಸಮುದಾಯದ ಜನರಿಗೆ ಮೂಲಭೂತ ಸೌಕರ್ಯಗಳನ್ನು ಪಡೆದುಕೊಳ್ಳಲು ಹಾಗೂ ಗೊಲ್ಲ ಸಮುದಾಯದ ಅಭಿವೃದ್ಧಿಗಾಗಿ ಅನುದಾನವನ್ನು ಮೀಸಲಿಟ್ಟು ರಾಜ್ಯದಲ್ಲಿ ಗೊಲ್ಲ ಸಮುದಾಯಕ್ಕೆ ಪ್ರತ್ಯೇಕ ಯಾದವ(ಗೋಲ್ಲ) ನಿಗಮ ಸ್ಥಾಪಿಸುವ ಕುರಿತು, ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರನ್ನು ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಸಮುದಾಯಗಳಿಗೆ ಸೇರಿದ 11 ನಿಗಮಗಳು ಕಾರ್ಯನಿರ್ವಹಿಸುತ್ತಿವೆ. ಗೊಲ್ಲ (ಯಾದವ) ಸಮುದಾಯಗಳು ಸೇರಿದಂತೆ ಪ್ರತ್ಯೇಕ ನಿಗಮವನ್ನು ಸ್ಥಾಪಿಸುವಂತೆ ಕೋರಿ ಸ್ವೀಕೃತವಾಗಿರುವ ಮನವಿಗಳು ಪರಿಶೀಲನೆಯಲ್ಲಿರುತ್ತವೆ. ಪ್ರಸ್ತುತ ಜಾರಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯ ಪ್ರವರ್ಗ-1ರಡಿಯಲ್ಲಿ ಬರುವ ಕ್ರ.ಸಂ:86(a) ಯಿಂದ (w)ವರೆಗೆ "ಗೊಲ್ಲ-ಯಾದವ" ಸೇರಿದಂತೆ ನಮೂದಾಗಿರುವ ಒಟ್ಟು 23 ಜಾತಿಗಳ ಅಭಿವೃದ್ಧಿಗಾಗಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮೂಲಕ ಹಾಲಿ ಇರುವ ಯೋಜನೆಗಳಲ್ಲಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**ಸಂಖ್ಯೆ: ಹಿಂವಕ 441 ಬಿಸಿಎ 2025**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು